1099 ಶ್ರೀ ಖಾದರ್ ಯು.ಟಿ. : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹೊರನಾಡ ಕನ್ನಡ ಸಂಘಗಳಿಗೆ ಮತ್ತು ಕನ್ನಡಿಗರಿಗೆ ಯಾವ ಯಾವ ಆಶ್ವಾಸನೆಗಳನ್ನು ನೀಡಲಾಗಿದೆ;

ಆ) ಹಾಗಿದ್ದಲ್ಲಿ, ಬೇಹ್ರಾನ್‌ನಲ್ಲಿನ ಹೊರನಾಡ ಕನ್ನಡ ಸಂಘಕ್ಕೆ ಸರ್ಕಾರವು ನೀಡಿರುವ ಆಶ್ವಾಸನೆ ಏನು;

ಇ) ಈ ಆಶ್ವಾಸನೆಗಳನ್ನು ಎಂದಿನಿಂದ ಕಾರ್ಯಗತಗೊಳಿಸ ಲಾಗುವುದು?

ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಯವರು) :

ಅ) ಹೊರನಾಡ ಕನ್ನಡಪರ ಸಂಘ ಸಂಸ್ಥೆಗಳ ಕಾರ್ಯ ಚಟುವಟಿಕೆಗಳನ್ನು ಪ್ರೋತ್ಸಾಹಿಸಲು ಧನಸಹಾಯ ನೀಡಲಾಗುತ್ತಿದೆ.

ಆ) ಬೇಹ್ರಾನ್ ಕನ್ನಡ ಸಂಘಕ್ಕೆ ಕಟ್ಟಡ ನಿರ್ಮಾಣಕ್ಕಾಗಿ ರೂ. 1.00 ಕೋಟಿ ನೆರವು ನೀಡಲು ಸರ್ಕಾರ ಘೋಷಣೆ ಮಾಡಿದ್ದು, ಪರಿಶೀಲನಾ ಹಂತದಲ್ಲಿದೆ.

ಇ) ಸಂಸ್ಥೆಯವರಿಂದ ಕಟ್ಟಡದ ನೀಲಿ ನಕಾಶೆ, ಅಂದಾಜು ವೆಚ್ಚಪಟ್ಟಿ ನೀಡುವಂತೆ ಪತ್ರ ಬರೆಯಲಾಗಿದೆ. ಅವರಿಂದ ಬಂದ ನಂತರ ಹಣ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುವುದು.

745 ಕೆ.ಎಂ.ಕೃಷ್ಣಮೂರ್ತಿ (ಕಡೂರು) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೇಂದ್ರ ಸರ್ಕಾರದಿಂದ ಕನ್ನಡ ಭಾಷೆಗೆ ಶಾಸ್ತ್ರೀಯ ಸ್ಥಾನಮಾನದಿಂದ ಕನ್ನಡ ಭಾಷೆಯ ಅಭಿವೃದ್ಧಿಗಾಗಿ ದೊರೆತಿರುವ ಅನುದಾನ ಎಷ್ಟು;

ಆ) ಕಳೆದ ಸಾಲಿನಲ್ಲಿ ಕೇಂದ್ರ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನ ಎಷ್ಟು;

ಇ) ಈ ಅನುದಾನವನ್ನು ಯಾವ ಯಾವ ಉದ್ದೇಶಕ್ಕಾಗಿ ಬಳಸಲಾಗಿದೆ;

ಈ) ಈ ಅನುದಾನವನ್ನು ಕನ್ನಡ-ಸಂಸ್ಕೃತಿ ಅಭಿವೃದ್ಧಿಗಾಗಿ ಬಳಸಿಕೊಳ್ಳಲಾಗಿದ್ದರೆ ಈ ಬಗ್ಗೆ ವಿವರವಾದ ಮಾಹಿತಿಯನ್ನು ಒದಗಿಸುವುದು?

ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಯವರು) :

ಅ) ಕೇಂದ್ರ ಸರ್ಕಾರವು ಚನ್ನೈ ಉಚ್ಚ ನ್ಯಾಯಾಲಯದ ರಿಟ್ ಅರ್ಜಿಯಲ್ಲಿನ ಅಂತಿಮ ತೀರ್ಮಾನಕ್ಕೆ ಒಳಪಟ್ಟು ಕನ್ನಡಕ್ಕೆ ಶಾಸ್ತ್ರೀಯ ಸ್ಥಾನಮಾನವನ್ನು ನೀಡಿರುವುದರಿಂದ ಯಾವುದೇ ಅನುದಾನವು ಬಂದಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಉದ್ಭವಿಸುವುದಿಲ್ಲ.

746 ಶ್ರೀ ಕೃಷ್ಣಮೂರ್ತಿ ಕೆ.ಎಂ. (ಕಡೂರು) : ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಈ ಸಾಲಿನಲ್ಲಿ ನೂತನವಾಗಿ ಪೊಲೀಸ್ ಠಾಣೆಗಳನ್ನು ಪ್ರಾರಂಭಿಸಲಾಗುವುದೇ?

ಆ) ಹಾಗಿದ್ದಲ್ಲಿ, ಎಷ್ಟು ಠಾಣೆಗಳನ್ನು ಎಲ್ಲೆಲ್ಲಿ ಪ್ರಾರಂಭಿಸಲಾಗುವುದು?

ಇ) ಕಡೂರು ತಾಲ್ಲೂಕಿನ ಹಿರೇನಲ್ಲೂರು ಎಮ್ಮೆದೊಡ್ಡಿ ಭಾಗಕ್ಕೆ ನೂತನ ಪೊಲೀಸ್‌ಠಾಣೆ ಆರಂಭಿಸಲು ಸರ್ಕಾರ ಕ್ರಮಕೈಗೊಂಡಿದೆಯೇ?

ಶ್ರೀ ಡಾ: ವಿ.ಎಸ್.ಆಚಾರ್ಯ (ಗೃಹ ಸಚಿವರು) :

ಅ) ಆ) ಮತ್ತು ಇ)

2009ನೇ ಸಾಲಿನಲ್ಲಿ ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು ರಾಜ್ಯದ ವಿವಿಧ ಸ್ಥಳಗಲ್ಲಿ ಪೊಲೀಸ್ ಠಾಣೆಗಳನ್ನು ಮಂಜೂರು ಮಾಡಲು ಕಳುಹಿಸಿರುವ ಕ್ರೋಢೀಕೃತ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ. ಹಣಕಾಸಿನ ಲಭ್ಯತೆಗೆ ಅನುಗುಣವಾಗಿ ಕ್ರೋಢೀಕೃತ ಪ್ರಸ್ತಾವನೆಯನ್ನು ಪರಿಗಣಿಸಲಾಗುವುದು.

Consolidated proposal sent by the DG & IGP for sanctioning new police stations at various places in the State during 2009 is under examination by Government. Consolidated proposal will be considered depending on the availability funds.

ಕಡೂರು ತಾಲ್ಲೂಕಿನ ಹಿರೇನಲ್ಲೂರು ಗ್ರಾಮದಲ್ಲಿ ಪೊಲೀಸ್ ಠಾಣೆ ತೆರೆಯುವ ಪ್ರಸ್ತಾವನೆಯು ಇಲಾಖೆಯ ಪರಿಶೀಲನೆಯಲ್ಲಿದೆ. ಎಮ್ಮೆದೊಡ್ಡಿ ಗ್ರಾಮದಲ್ಲಿ ಪೊಲೀಸ್ ಠಾಣೆ ತೆರೆಯುವ ಪ್ರಸ್ತಾವನೆಯು ಸರ್ಕಾರಕ್ಕೆ ಬಂದಿರುವುದಿಲ್ಲ.